ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1995
ಮಾನ್ಯ ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು)
ವಿಷಯ	:	ಬೀದರ್ ಜಿಲ್ಲೆ ಪ್ರವಾಸಿ ತಾಣವಾಗಿ ಮಾಡುವ ಬಗ್ಗೆ.
ಉತ್ತರಿಸುವ ದಿನಾಂಕ	:	27.03.2020
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಬೀದರ್ ನಗರದ ಪುಣ್ಯ ಕ್ಷೇತ್ರವಾದ ಪಾಪನಾಶ ದೇವಸ್ಥಾನದ ಸ್ಥಳವನ್ನು ಪ್ರವಾಸಿ ತಾಣವನ್ನಾಗಿ ಮಾಡಲು ಸರ್ಕಾರದ ಮುಂದೆ ಯೋಜನೆಯಿದೆಯೇ; ಇದ್ದಲ್ಲಿ, ಯೋಜನೆಗಳಾವುವು; ಅದಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿದೆ; ಯೋಜನೆಯಿಲ್ಲದಿದ್ದಲ್ಲಿ, ಸೂಕ್ತ ಕಾರಣಗಳೇನು;	2016-17ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದಲ್ಲಿ ಬೀದರ್ ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳನ್ನು ರೂ.10.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಮಾದರಿ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲು ಘೋಷಿಸಲಾಗಿರುತ್ತದೆ. ಅದರನ್ವಯ ಬೀದರ್ ನಗರದ ಪಾಪನಾಶ ದೇವಸ್ಥಾನದ ಹತ್ತಿರವಿರುವ ಪಾಪನಾಶಿ ಕೆರೆಯನ್ನು ರೂ.150.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ತಾತ್ವಿಕ ಅನುಮೋದನೆಯನ್ನು ನೀಡಲಾಗಿದೆ. ಈ ಸಂಬಂಧ ಕೆ.ಆರ್.ಐ.ಡಿ.ಎಲ್. ಸಂಸ್ಥೆಯು ಅಂದಾಜು ಪಟ್ಟಿಯನ್ನು ಸಲ್ಲಿಸಿದ್ದು, ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.
ಆ)	ಬೀದರ್ ನಗರದಲ್ಲಿರುವ ಸುರಂಗ ಬಾವಿಗಳು (ಕರೇಜ್) ಎಷ್ಟು; ಅವುಗಳ ದುರಸ್ಥಿಗಾಗಿ ಇಲ್ಲಿಯವರೆಗೆ ಸರ್ಕಾರದಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಇವುಗಳಲ್ಲಿ ಬಾಕಿ ಉಳಿದಿರುವ ಅನುದಾನ ಎಷ್ಟು; ಮತ್ತು ಈ ದುರಸ್ಥಿ ಕಾಮಗಾರಿಗಳನ್ನು ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು?	ಬೀದರ್ ನಗರದ ವ್ಯಾಪ್ತಿಯಲ್ಲಿ ಬರುವ ಶಿಕಾರಗ ಮತ್ತು ಕರೇಜ್ ಪುನರುತ್ಥಾನ, ಕರೇಜ್‌ದಲ್ಲಿ ಹೂಳು ತೆಗೆಯುವುದು, ಸುತ್ತುಗೋಡೆ, ನೀರು ಶುದ್ಧಿಕರಣ, ಉದ್ಯಾನವನ ಹಾಗೂ ಪ್ರವಾಸಿಗರಿಗೆ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಯನ್ನು ರೂ.270.00 ಲಕ್ಷಗಳಲ್ಲಿ ಕೈಗೊಳ್ಳಲು ಅನುಮೋದನೆಯನ್ನು ನೀಡಲಾಗಿತ್ತು. ಅದರಂತೆ, ಲೋಕೋಪಯೋಗಿ ಇಲಾಖೆ, ಬೀದರ್ ಜಿಲ್ಲೆ ಇವರಿಂದ ಎರಡು ಬಾರಿ ಟೆಂಡರ್ ಕರೆಯಲಾಗಿದ್ದು, ಈ ಎರಡು ಟೆಂಡರ್‌ಗಳಲ್ಲಿ ಅರ್ಹ ಗುತ್ತಿಗೆದಾರರು ಆಯ್ಕೆಯಾಗಿರುವುದಿಲ್ಲ. ಸದರಿ ಕಾಮಗಾರಿಯನ್ನು ಪ್ರಾರಂಭಿಸದೇ ಇರುವುದರಿಂದ ಈ ಕಾಮಗಾರಿಯನ್ನು ರದ್ದುಪಡಿಸಿ ಆದೇಶಿಸಲಾಗಿದೆ.

ಕಡತ ಸಂಖ್ಯೆ: ಟಿಓಆರ್ 133 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.